# <u>ಕರ್ನಾಟಕ ವಿಧಾನ ಪರಿಷತ್ತು</u>

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 933

ಸದಸ್ಯರ ಹೆಸರು : ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 14.03.2025.

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಎಷ್ಟು ಗ್ರಾಮ ಪಂಚಾಯತ್ ಕಛೇರಿಗಳಲ್ಲಿ ಗ್ರಂಥಾಲಯಗಳನ್ನು ತೆರೆಯಲಾಗಿದೆ; ಎಷ್ಟು ಗ್ರಾಮ ಪಂಚಾಯತ್‌ಗಳಲ್ಲಿ ಗ್ರಂಥಾಲಯ ಸೌಲಭ್ಯವಿರುವುದಿಲ್ಲ; (ವಿವರ ನೀಡುವುದು) | ಕಲಬುರಗಿ ಜಿಲ್ಲೆಯಲ್ಲಿ ಒಟ್ಟು 261 ಗ್ರಾಮ ಪಂಚಾಯಿತಿಗಳಲ್ಲಿ 219 ಗ್ರಂಥಾಲಯಗಳು ಕಾರ್ಯನಿರ್ವಹಿಸುತ್ತಿವೆ. 43 ಗ್ರಂಥಾಲಯಗಳನ್ನು ಹೊಸದಾಗಿ ಮಂಜೂರು ಮಾಡಲಾಗಿರುತ್ತದೆ.<br><br>ಯಾದಗಿರಿ ಜಿಲ್ಲೆಯಲ್ಲಿ ಒಟ್ಟು 122 ಗ್ರಾಮ ಪಂಚಾಯತಿಗಳಲ್ಲಿ 124 ಗ್ರಂಥಾಲಯಗಳು ಕಾರ್ಯನಿರ್ವಹಿಸುತ್ತಿವೆ. |
| (ಆ) | ಎಲ್ಲಾ ಗ್ರಾಮ ಪಂಚಾಯತಿ ಹಾಗೂ ಹೆಚ್ಚು ಜನರಿರುವ ಗ್ರಾಮಗಳಲ್ಲಿ ಗ್ರಂಥಾಲಯಗಳನ್ನು ತೆರೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ ಹಾಗೂ ಗ್ರಂಥಾಲಯ ತೆರೆಯುವುದಕೋಸ್ಕರ ಪ್ರತ್ಯೇಕ ಅನುದಾನವೆನ್ನಾದರೂ ಸರ್ಕಾರ ನಿಗಧಿಪಡಿಸಿದೆಯೇ; (ವಿವರ ನೀಡುವುದು) | 1) ಪ್ರಸ್ತುತ ಗ್ರಂಥಾಲಯ ಹೊಂದಿಲ್ಲದ ಗ್ರಾಮ ಪಂಚಾಯತಿ ಮತ್ತು ಗ್ರಾಮಗಳಲ್ಲಿ ಕೇಂದ್ರ ಸರ್ಕಾರದ "Scheme for Special Assistance to States for Capital Investment" ಯೋಜನೆಯ "Children and Adolescents Libraries and Digital Infrastucture" ಕಾರ್ಯಕ್ರಮದ ಅಡಿಯಲ್ಲಿ 6599 ಹೊಸ ಗ್ರಂಥಾಲಯಗಳನ್ನು ತೆರೆಯಲು ಕ್ರಮ ವಹಿಸಲಾಗುತ್ತಿದೆ. ಈ ಯೋಜನೆಯಡಿ ರಾಜ್ಯದಲ್ಲಿ ಈಗಾಗಲೇ 6235 ಹೊಸ ಗ್ರಂಥಾಲಯಗಳನ್ನು ಪ್ರಾರಂಭಿಸಲು ಮಂಜೂರಾತಿ ನೀಡಿ ಆದೇಶ ಹೊರಡಿಸಲಾಗಿದೆ.<br><br>2) ಕೇಂದ್ರ ಸರ್ಕಾರವು ಈ ಯೋಜನೆಯಡಿಯಲ್ಲಿ ರಾಜ್ಯದಲ್ಲಿ 6599 ಹೊಸ ಗ್ರಂಥಾಲಯಗಳನ್ನು ಪ್ರಾರಂಭಿಸಲು ಪ್ರತಿ ಗ್ರಂಥಾಲಯಕ್ಕೆ ರೂ.4.00 ಲಕ್ಷಗಳಂತೆ ಒಟ್ಟು ರೂ.263.96 ಕೋಟಿಗಳನ್ನು ಮಂಜೂರು ಮಾಡಿರುತ್ತದೆ.<br><br>3) ಪ್ರತಿ ಗ್ರಂಥಾಲಯಕ್ಕೆ ನಿಗದಿಯಾಗಿರುವ ರೂ 4.00 ಲಕ್ಷಗಳ ಮೊತ್ತದಲ್ಲಿ ರೂ 2.00 ಲಕ್ಷ |

| | | |
|---|---|---|
| | | ವೆಚ್ಚದಲ್ಲಿ National Book Trust India, Ministry of Education, Government of India ರವರು ಪ್ರಕಟಿಸಿರುವ ಪುಸ್ತಕಗಳನ್ನು ಖರೀದಿಸಲಾಗಿರುತ್ತದೆ.<br>4) ಪ್ರತಿ ಗ್ರಂಥಾಲಯಕ್ಕೆ ರೂ 1.00 ಲಕ್ಷ ವೆಚ್ಚದಲ್ಲಿ ಪೀಠೋಪಕರಣಗಳನ್ನು ಖರೀದಿಸುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. ಪ್ರತಿ ಗ್ರಂಥಾಲಯಕ್ಕೆ ರೂ 1.00 ಲಕ್ಷಗಳ ವೆಚ್ಚದಲ್ಲಿ ಕಂಪ್ಯೂಟರ್ ಮತ್ತು ಯುಪಿಎಸ್ ಗಳನ್ನು ಖರೀದಿಸಲಾಗುವುದು. |
| (ಇ) | ಗ್ರಂಥಾಲಯ ತೆರೆಯಲು ಸರ್ಕಾರ ಅನುಸರಿಸುತ್ತಿರುವ ಮಾನದಂಡವೇನು? | 1) ಕೇಂದ್ರ ಸರ್ಕಾರದ "Scheme for Special Assistance to States for Capital Investment" ಯೋಜನೆಯ "Children and Adolescents Libraries and Digital Infrastucture" ಕಾರ್ಯಕ್ರಮದ ಅಡಿಯಲ್ಲಿ ಪ್ರಸ್ತುತ ಗ್ರಂಥಾಲಯ ಹೊಂದಿರುವ ಗ್ರಾಮಗಳನ್ನು ಹೊರತುಪಡಿಸಿ ಉಳಿದ ಗ್ರಾಮಗಳಲ್ಲಿ ಗ್ರಂಥಾಲಯಗಳನ್ನು ಪ್ರಾರಂಭಿಸಲಾಗುತ್ತಿದೆ.<br>2) ಹೊಸ ಗ್ರಂಥಾಲಯ ಪ್ರಾರಂಭಿಸಲು ಕಟ್ಟಡಗಳನ್ನು ಗ್ರಾಮ ಪಂಚಾಯತಿಗಳು ಗುರುತಿಸಬೇಕು.<br>3) ಹೊಸದಾಗಿ ಗ್ರಂಥಾಲಯಗಳನ್ನು ಪ್ರಾರಂಭಿಸಲು ಗುರುತಿಸಲಾದ ಕಟ್ಟಡಕ್ಕೆ ಅಗತ್ಯವಿರುವ ದುರಸ್ತಿ, ನವೀಕರಣ, ವಿದ್ಯುತ್ ಸಂಪರ್ಕ, ಕುಡಿಯುವ ನೀರು, ಫ್ಯಾನ್ ವೆಚ್ಚಗಳನ್ನು ಗ್ರಾಮ ಪಂಚಾಯತಿ ಸ್ವಂತ ಸಂಪನ್ಮೂಲದಿಂದ ಭರಿಸತಕ್ಕದ್ದು.<br>4) ಹೊಸ ಗ್ರಂಥಾಲಯಗಳಿಗೆ ಯಾವುದೇ ಹೊಸ ಸಿಬ್ಬಂದಿ ನೇಮಕ ಮಾಡಿಕೊಳ್ಳಲು ಅವಕಾಶ ಇರುವುದಿಲ್ಲ.<br>5) ಹೊಸ ಗ್ರಂಥಾಲಯಗಳನ್ನು ಗ್ರಾಮ ಪಂಚಾಯತಿಗಳು GPLF ಮೂಲಕ ನಿರ್ವಹಿಸಬೇಕು. |

ಸಂಖ್ಯೆ: ಗ್ರಾಅಪ 196 ಗ್ರಾಪಂಅ 2025

(ಪ್ರಿಯಾಂಕ್ ಖರ್ಗೆ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.